# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜೀವ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ರಾಜ್ಯ ಯೋಜನಾ ನಿರ್ವಹಣಾ ಘಟಕದ ಹುದ್ದೆಗಳ ನೇರ ನೇಮಕಾತಿಗಾಗಿ "ನೇಮಕಾತಿ ಸಮಿತಿ"ರಚಿಸುವ ಕುರಿತು.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:25.07.2013

ಪ್ರಸ್ತಾವನೆ:-

ಮೇಲೆ ಓದಲಾದ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ, ರಾಜೀವ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಈ ಯೋಜನೆಯಡಿ ಗ್ರಾಮ ಸಭಾ ಮತ್ತು ವಾರ್ಡ ಸಭಾಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು, ಚುನಾಯಿತ ಸದಸ್ಯರ ಸಾಮರ್ಥ್ಯಾಭಿವೃದ್ಧಿ ವೃದ್ಧಿಸಲು, ಪಂಚಾಯತ್ ರಾಜ್ ಸಂಸ್ಥೆಗಳು ಸ್ಥಳೀಯ ಸ್ವಯಂ ಆಡಳಿತ ಕೇಂದ್ರಗಳಾಗಿ ಕಾರ್ಯನಿರ್ವಹಿಸಲು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವು ನಿಟ್ಟಿನಲ್ಲಿ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಬಲಗೊಳಿಸುವ ಕಾರ್ಯಕ್ರಮಗಳ ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯನ್ನು ಅನುಷ್ಠಾನದ ಜವಾಬ್ದಾರಿ ಮತ್ತು ಉಸ್ತುವಾರಿಯನ್ನು ನಿರ್ವಹಿಸಲು ರಾಜ್ಯ ಮಟ್ಟದ ಯೋಜನಾ ನಿರ್ವಹಣಾ ಘಟಕವನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ. ಈ ಯೋಜನಾ ಘಟಕದ ನಿರ್ವಹಣೆಗೆ ಅಗತ್ಯವಾಗಿರುವ ಹುದ್ದೆಗಳಿಗೆ ಬಾಹ್ಯ ~~ಮೂಲದ ಸೇವೆಯನ್ನು~~ ನೇರ ಸಂದರ್ಶನದ ಮೂಲಕ ಆಯ್ಕೆ ಮಾಡಲು "ನೇಮಕಾತಿ ಸಮಿತಿ"ರಚಿಸಲು ಸರ್ಕಾರ ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/187/ಜಿಪಸ/2013 ಬೆಂಗಳೂರು. ದಿನಾಂಕ:02.09.2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ರಾಜೀವ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದ ರಾಜ್ಯ ಯೋಜನಾ ಯೋಜನಾ ನಿರ್ವಹಣಾ ಘಟಕಕ್ಕೆ ಮಂಜೂರಾಗಿರುವ ಹುದ್ದೆಗಳಿಗೆ ನೇರಸಂದರ್ಶನದ ಮೂಲಕ ಆಯ್ಕೆ ಮಾಡಲು ಕೆಳಕಂಡ ಸದಸ್ಯರನ್ನೊಳಗೊಂಡ ನೇಮಕಾತಿ ಸಮಿತಿಯನ್ನು ರಚನೆ ಮಾಡಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಅಧಿಕಾರಿಯ ಪದನಾಮ | ಸ್ಥಾನಮಾನ |
|---|---|---|
| 1. | ನಿರ್ದೇಶಕರು(ಪಂ.ರಾಜ್-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಅ ಮತ್ತು ಪಂ. ರಾಜ್ ಇಲಾಖೆ | ಅಧ್ಯಕ್ಷರು |
| 2. | ನಿರ್ದೇಶಕರು(ಪಂ.ರಾಜ್-1) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಅ ಮತ್ತು ಪಂ. ರಾಜ್ ಇಲಾಖೆ | ಸದಸ್ಯರು |
| 3. | ಆಂತರಿಕ ಆರ್ಥಿಕ ಸಲಹೆಗಾರರು,ಗ್ರಾಅ ಮತ್ತು ಪಂ ರಾಜ್ ಇಲಾಖೆ | ಸದಸ್ಯರು |
| 4. | ಜಂಟಿ ನಿರ್ದೇಶಕರು-1, ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ, ಗ್ರಾಅ ಮತ್ತು ಪಂ ರಾಜ್ ಇಲಾಖೆ | ಸದಸ್ಯರು |
| 5. | ಅಪರ ಮುಖ್ಯಸ್ಥರು(ಕಾರ್ಯಾಚರಣೆ) ಗ್ರಾಮಸ್ವರಾಜ್ ಯೋಜನೆ, ಗ್ರಾಅ ಮತ್ತು ಪಂ. ರಾಜ್ ಇಲಾಖೆ | ಸದಸ್ಯರು |

ಕರ್ನಾಟಕ ರಾಜ್ಯ ಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಎನ್.ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಸಲ್ಲಿಸಿದೆ.

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು

2. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
3. ನಿರ್ದೇಶಕರು(ಪಂ.ರಾಜ್-1&2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಅ ಮತ್ತು ಪಂ. ರಾಜ್ ಇಲಾಖೆ, ಇವರ ಇವರ ಆಪ್ತ ಸಹಾಯಕರು.
4. ಜಂಟಿ ನಿರ್ದೇಶಕರು–1, ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ, ಗ್ರಾಅ ಮತ್ತು ಪಂ. ರಾಜ್ ಇಲಾಖೆ.
5. ಅಪರ ಮುಖ್ಯಸ್ಥರು(ಕಾರ್ಯಾಚರಣೆ) ಗ್ರಾಮಸ್ವರಾಜ್ ಯೋಜನೆ, ಗ್ರಾಅ. ಮತ್ತು ಪಂ. ರಾಜ್ ಇಲಾಖೆ.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ವಿಶೇಷ ಅಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಮಾಹಿತಿಗಾಗಿ ಹಾಗೂ ಸದರಿ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
8. ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಮಾಹಿತಿಗಾಗಿ ಹಾಗೂ ಸದರಿ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
9. ಹೆಚ್ಚುವರಿ ಪ್ರತಿ ಹಾಗೂ ಮಹಾ ಕಡತ.